# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಕೋರಮಂಗಲ ಉಪ–ವಿಭಾಗದ, ಜಕ್ಕಸಂದ್ರ ವಾರ್ಡ್ ಸಂಖ್ಯೆ–173 ದಿನಾಂಕ: 23–02–2021 ರಂದು**
**ಫೆಬ್ರವರಿ–2021 ಮಾಹೆಯ ವಾರ್ಡ್ ಸಮಿತಿ ವಿಶೇಷ ಸಭೆಯ ನಡವಳಿಗಳು**

ಶ್ರೀ ಸಂಜೀವ್‌ಕುಮಾರ್, ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ 173ರ ರವರ ಅಧ್ಯಕ್ಷತೆಯಲ್ಲಿ ಗ್ರಂಥಾಲಯ ಕಟ್ಟಡ, ಉದ್ಯಾನವನ ಹತ್ತಿರ, ಹೆಚ್.ಎಸ್.ಆರ್. 5ನೇ ಸೆಕ್ಟರ್, ಜಕ್ಕಸಂದ್ರ, (ಜಕ್ಕಸಂದ್ರ ವಾರ್ಡ್ ಕಛೇರಿ, ಬಿ.ಬಿ.ಎಂ.ಪಿ) ಬೆಂಗಳೂರು ದಿನಾಂಕ: 23.02.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ವಿಶೇಷ ಸಭೆಯ ನಡವಳಿಗಳು:ಸ

ಹಾಜರಿದ್ದ ಸದಸ್ಯರು:–

1. ಶ್ರೀ ಎಂ.ಎ. ಪೊನ್ನಪ್ಪ
2. ಶ್ರೀ ಎಂ. ಎನ್. ಆಚಾರ್ಯ
3. ಶ್ರೀ ಉದಯಶಂಕರ್

ಹಾಜರಿದ್ದ ಅಧಿಕಾರಿಗಳು:–

1. ಶ್ರೀ ಪ್ರದೀಪ್ ಕುಮಾರ್, ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು, ವಾರ್ಡ್–173 ಜಕ್ಕಸಂದ್ರ
2. ಶ್ರೀ ಓಬಳೇಶ್, ಹಿರಿಯ ಆರೋಗ್ಯ ಪರಿವೀಕ್ಷಕರು, ಆರೊಗ್ಯ ಇಲಾಖೆ
3. ಶ್ರೀ ಎಸ್. ನವಿನ್ ಕುಮಾರ್, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ
4. ಶ್ರೀ ಅರವಿಂದ್ .ಆರ್, ಕಿರಿಯ ಆರೋಗ್ಯ ಪರಿವೀಕ್ಷಕರು
5. ಶ್ರೀ ವಿನಯ್ ಕುಮಾರ್, ಸಹಾಯಕ ಅಭಿಯಂತರರು, ಬೆಸ್ಕಾಂ, ಹೆಚ್.ಎಸ್.ಆರ್ ಲೇಔಟ್
6. ಶ್ರೀ ಮಂಜುನಾಥ್ .ಡಿ ವಾರ್ಡ್ ಮಾರ್ಷಲ್

* * * * *

ಶ್ರೀ. ಸಂಜೀವ್‌ಕುಮಾರ್, ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ 173 ರವರು ವಿಶೇಷ ಸಭೆಗೆ ಹಾಜರಿದ್ದ ಎಲ್ಲಾ ವಾರ್ಡ್ ಸಮಿತಿ ಸದಸ್ಯರುಗಳನ್ನು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸಭೆಗೆ ಸ್ವಾಗತಿಸಿದರು ಮತ್ತು 2021–22ನೇ ಸಾಲಿನ ಆಯವ್ಯಯಕ್ಕೆ ಸಂಬಂಧಿಸಿದಂತೆ, ಸಲಹೆ ಹಾಗೂ ಸೂಚನೆಗಳನ್ನು ಪಡೆಯಲು ಉದ್ದೇಶಿಸಿದ್ದು, ವಾರ್ಡ್–148 ರಲ್ಲಿ ಕೈಗೊಳ್ಳುವ ಕಾಮಗಾರಿಗಳ ಬಗ್ಗೆ ಸದಸ್ಯರು ಹಾಗೂ ಅಧಿಕಾರಿಗಳೊಂದಿಗೆ ವಿಶೇಷ ಸಭೆಯಲ್ಲಿ ಚರ್ಚಿಸಲಾಯಿತು.

2021–22ನೇ ಸಾಲಿನ ಆಯವ್ಯಯದಲ್ಲಿ ವಾರ್ಡ್–173 ಜಕ್ಕಸಂದ್ರ ವಾರ್ಡ್‌ನ ಅನುದಾನಕ್ಕೆ ಈ ಕೆಳಕಂಡ ಕಾಮಗಾರಿಗಳನ್ನು ಸೇರಿಸಬೇಕೆಂದು ವಾರ್ಡ್ ಸಮಿತಿ ಸಭೆಯಲ್ಲಿ ಒಮ್ಮತದಿಂದ ಸೂಚಿಸಿರುತ್ತಾರೆ.

ಶ್ರೀ ಪೊನ್ನಪ್ಪ ರವರು ಮಾತನಾಡಿ, 14ನೇ ಮುಖ್ಯರಸ್ತೆಯ ಫುಟ್‌ಪಾತ್ ಮೀಡಿಯನ್ ಮೇಲೆ ಬೀದಿ ದೀಪಗಳ ಕಂಬಗಳನ್ನು ಅಳವಡಿಸುವ ಕಾಮಗಾರಿಗೆ ಹಣವನ್ನು ಮೀಸಲಿರಿಸಲು ಕೋರಿದರು –75.00 ಲಕ್ಷಗಳು.

ಹೆಚ್.ಎಸ್.ಆರ್ 5ನೇ ಸೆಕ್ಟರ್‌ನ 14ನೇ ಮುಖ್ಯರಸ್ತೆಯಿಂದ 1ನೇ ಅಡ್ಡರಸ್ತೆಗೆ ಸಂಪರ್ಕಿಸುವ ರಸ್ತೆಗಳ ಚರಂಡಿ ಕಾಮಗಾರಿ ಕೈಗೊಳ್ಳಲು – ರೂ. 50.00 ಲಕ್ಷಗಳು



Scanned by CamScanner

ಹೆಚ್.ಎಸ್.ಆರ್. 5ನೇ ಹಂತದ ಎಲ್ಲಾ ರಸ್ತೆಗಳ ಮರು ಡಾಂಬರೀಕರಣಕ್ಕೆ ತಗಲುವ ಅಂದಾಜು ಮೊತ್ತ ರೂ.100 ಲಕ್ಷಗಳನ್ನು ಮೀಸಲಿಡುವುದು.

ಹೆಚ್.ಎಸ್.ಆರ್. 5ನೆ ಸೆಕ್ಟರ್ 14ನೇ ಮುಖ್ಯರಸ್ತೆ ಬಿ.ಡಿ.ಎ ಫ್ಲೈಓವರ್ ಬಳಿ ಪಾದಚಾರಿ ಮಾರ್ಗ, ಕ್ರಾಸಿಂಗ್ ನಿರ್ಮಾಣ ಮಾಡುವ ಕಾಮಗಾರಿ ರೂ.30.00 ಲಕ್ಷ ಗಳನ್ನು ಮೀಸಲಿಡುವುದು.

ಹೆಚ್.ಎಸ್.ಆರ್. 5ನೇ ಹಂತ ಹಾಗೂ ಟೀಚರ್ಸ್ ಕಾಲೋನಿಯ ಎಲ್ಲಾ ರಸ್ತೆಬದಿ ಚರಂಡಿಗಳಲ್ಲಿರುವ ಊಳು ತೆಗೆಯುವ ಕಾಮಗಾರಿಗೆ ರೂ.60.00 ಲಕ್ಷಗಳನ್ನು ಮೀಸಲಿಡುವುದು.

ಹಸಿ ಕಸ ಮತ್ತು ಒಣ ಕಸ ಬೇರ್ಪಡಿಸದ ಬಾಡಿಗೆ ಮನೆಯ ಮಾಲೀಕರ ಜೊತೆ ಜೊತೆಗೆ ಕಟ್ಟಡದ ಮಾಲೀಕರ ವಿರುದ್ಧ ಕೆ.ಎಂ.ಸಿ ಕಾಯ್ದೆ ಪ್ರಕಾರ ಕ್ರಮವಹಿಸಲು/ ದಂಡ ವಿಧಿಸಲು ಸೂಕ್ತ ಕಾನೂನು ರಚಿಸಲು ಆಯವ್ಯಯದಲ್ಲಿ ಅಳವಡಿಸಿಕೊಳ್ಳಲು ಕೋರಿದರು.

ಹೆಚ್.ಎಸ್.ಆರ್. 5ನೇ ಸೆಕ್ಟರ್‌ಗೆ ಸಂಬಂಧಿಸಿದಂತೆ, ಮಳೆ ನೀರು ನಿಯಂತ್ರಣಕ್ಕೆ ತೆಗೆದುಕೊಂಡ ಕ್ರಮಗಳು ಹಾಗೂ ಒಳಚರಂಡಿ ನಿರ್ವಹಣೆ ಮತ್ತು ಮರುಬಳಕೆ ಬಗ್ಗೆ ತೆಗೆದುಕೊಂಡ ಕ್ರಮ ಹಾಗೂ ಮುಂದಿನ ಆಯವ್ಯಯದಲ್ಲಿ ಅನುದಾನ ನಿಗಧಿ ಕೋರಿ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ವಾರ್ಡ್ ಸಮಿತಿ ಸಭೆಗೆ ಕೋರಿದರು.

ಕೊನೆಯದಾಗಿ, ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ಸಭೆಗೆ ಹಾಜರಾಗಿದ್ದ ಎಲ್ಲಾ ಸದಸ್ಯರು ಹಾಗೂ ಅಧಿಕಾರಿಗಳಿಗೆ ವಂದನೆಯನ್ನು ತಿಳಿಸುತ್ತಾ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| (ಶ್ರೀ. ಪ್ರದೀಪ್ ಕುಮಾರ್ .ಆರ್) | (ಶ್ರೀ ಸಂಜೀವಕುಮಾರ್) |
| ಸದಸ್ಯ ಕಾರ್ಯದರ್ಶಿ | ನೋಡಲ್ ಅಧಿಕಾರಿಗಳು |
| ಹಾಗೂ ಸಹಾಯಕ ಅಭಿಯಂತರರು, | ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು |
| ವಾರ್ಡ್–173 ಜಕ್ಕಸಂದ್ರ | ವಾರ್ಡ್–173 ಜಕ್ಕಸಂದ್ರ |



Scanned by CamScanner

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ನಂ.ಸ.ಕಾ.ನಿ.ಅ./ಕೋ.ಉ.ವಿ/ಪಿ.ಆರ್/ 20 /2020-21

ಸಹಾಯಕ ಕಾರ್ಯಪಾಲಕ ಅಭಿಯಂತರರರ ಕಛೇರಿ,
ಕೋರಮಂಗಲ ಉಪವಿಭಾಗ,
ಪಾಲಿಕೆ ಕಟ್ಟಡಗಳು, 2ನೇ ಅಡ್ಡರಸ್ತೆ,
5ನೇ ಬ್ಲಾಕ್, ಕೋರಮಂಗಲ,
ಬೆಂಗಳೂರು, ದಿನಾಂಕ: 22/02/2021

## ಸಭೆ ಸೂಚನಾ ಪತ್ರ

ಮಾನ್ಯ ಆಯುಕ್ತರು ರವರ ಕಛೇರಿ ಆದೇಶ ಸಂಖ್ಯೆ.ಬಿ12(5)/ಪಿಆರ್/35/2020-21, ದಿನಾಂಕ:21-09-2020ರ ರೀತ್ಯಾ ವಾರ್ಡ್ ಸಮಿತಿ ಸಭೆಯನ್ನು ನಡೆಸುತ್ತಿದ್ದು, 2020-21ನೇ ಸಾಲಿನ ಆಯವ್ಯಯಕ್ಕೆ ಸಂಬಂಧಿಸಿದಂತೆ, ಸಲಹೆ ಹಾಗೂ ಸೂಚನೆಗಳನ್ನು ಪಡೆಯಲು ವಿಶೇಷ ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಂಖ್ಯೆ.173 (ಜಕ್ಕಸಂದ್ರ) ವ್ಯಾಪ್ತಿಯ ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ದಿನಾಂಕ:23.02.2021 ರಂದು ಬೆಳಗ್ಗೆ 11.00 ಕ್ಕೆ ಸ್ಥಳ: ಗ್ರಂಥಾಲಯ ಕಟ್ಟಡ, ಉದ್ಯಾನವನ ಹತ್ತಿರ, ಹೆಚ್.ಎಸ್.ಆರ್. 5ನೇ ಸೆಕ್ಟರ್, ಜಕ್ಕಸಂದ್ರ, (ಜಕ್ಕಸಂದ್ರ ವಾರ್ಡ್ ಕಛೇರಿ, ಬಿ.ಬಿ.ಎಂ.ಪಿ) ಬೆಂಗಳೂರು ಇಲ್ಲಿ ನಿಗಧಿಪಡಿಸಿದ್ದು, ವಾರ್ಡ್‌ಗೆ ಸಂಬಂಧಿಸಿದ ವಾರ್ಡ್ ಸಮಿತಿ ಸದಸ್ಯರು ಹಾಗೂ ಅಧಿಕಾರಿಗಳು ತಪ್ಪದೇ ಹಾಜರಾಗಲು ಈ ಮೂಲಕ ಕೋರಲಾಗಿದೆ.

22/02/2021

ಕಾರ್ಯದರ್ಶಿ, ವಾರ್ಡ್ ಸಮಿತಿ & ಸಹಾಯಕ ಅಭಿಯಂತರರು
ವಾರ್ಡ್ ನಂ.173 ಜಕ್ಕಸಂದ್ರ

**ಪ್ರತಿಯನ್ನು:-**

1. ಜಂಟಿ ಆಯುಕ್ತರು, ದಕ್ಷಿಣ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು, ದಕ್ಷಿಣ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು, ಬಿ.ಟಿ.ಎಂ. ಲೇಔಟ್, ಬಿ.ಬಿ.ಎಂ.ಪಿ
4. ಕಾರ್ಯಪಾಲಕ ಅಭಿಯಂತರರು, ಬಿ.ಟಿ.ಎಂ. ವಲಯ ರವರಿಗೆ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ಬಿ.ಬಿ.ಎಂ.ಪಿ
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ಬಿ.ಟಿ.ಎಂ. ಲೇಔಟ್ ವಿಭಾಗ ರವರಿಗೆ ಸಲ್ಲಿಸುತ್ತಾ, ವಾರ್ಡ್‌ನ ಆರೋಗ್ಯ ಪರಿವೀಕ್ಷಕರು ಹಾಗೂಘನತ್ಯಾಜ್ಯ ನಿರ್ವಹಣೆಯ ಗುತ್ತಿಗೆದಾರರೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
7. ಸಹ ಕಂದಾಯ ಅಧಿಕಾರಿಗಳು, ಕಂದಾಯ ಇಲಾಖೆ, ಕೋರಮಂಗಲ
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ. ಬೆಂಗಳೂರು.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೀದಿ ದೀಪಗಳ ನಿರ್ವಹಣೆ, ಬಿ.ಬಿ.ಎಂ.ಪಿ
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಬೆಂಗಳೂರು
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗ, ದಕ್ಷಿಣ ವಲಯ . ಬೆಂಗಳೂರು
12. ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ದಕ್ಷಿಣ ವಲಯ, ಬೆಂಗಳೂರು.
13. ಆರಕ್ಷಕ ನಿರೀಕ್ಷಕರು, ಮಡಿವಾಳ ಪೋಲಿಸ್ ಠಾಣೆ ರವರಿಗೆ ಸಲ್ಲಿಸಿ, ಸಭೆಗೆ ತಪ್ಪದೇ ಹಾಜರಿರಲು ಕೋರಿದೆ.
14. ಆರಕ್ಷಕ ನಿರೀಕ್ಷಕರು, ಸಂಚಾರ ಪೋಲಿಸ್ ಠಾಣೆ, ಮಡಿವಾಳ ರವರಿಗೆ ಸಲ್ಲಿಸಿ, ಸಭೆಗೆ ತಪ್ಪದೇ ಹಾಜರಿರಲು ಕೋರಿದೆ.
15. ರೆಸಿಡೆನ್ಷಿಯಲ್ ವೆಲ್‌ಫೇರ್ ಅಸೋಸಿಯೇಷನ್, ಜಕ್ಕಸಂದ್ರ ವಾರ್ಡ್-173
16. ಕಛೇರಿ ಕಡತಕ್ಕೆ.

Scanned by CamScanner



Scanned by CamScanner



Scanned by CamScanner



Scanned by CamScanner